ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕದಲ್ಲಿ ಸರಕಾರೀ ನಿಯಂತ್ರಣದಲ್ಲಿರುವ ದೇವಾಲಯಗಳ ಸಂಖ್ಯೆ ಎಷ್ಟು? ಇವುಗಳ ತಲಾ ಆದಾಯ ಮತ್ತು ವೆಚ್ಚವೆಷ್ಟು?

ಆ) ಈ ದೇವಾಲಯಗಳಲ್ಲಿ ಎಲ್ಲರಿಗೂ ಮುಕ್ತ ಪ್ರದೇಶವಿರುವ ದೇವಾಲಯಗಳ ಸಂಖ್ಯೆ ಎಷ್ಟು ಹಾಗೂ ಪ್ರತಿ ಕ್ಷೇತ್ರಗಳಿಗೂ ಬರುವ ವಾರ್ಷಿಕ ಭಕ್ತಾದಿಗಳ ಸಂಖ್ಯೆ ಎಷ್ಟು ಹಾಗೂ ಭಕ್ತಾದಿಗಳ ಸಂಖ್ಯೆಯನ್ನು ಗುರುತಿಸುವ ಮಾಪನ ಯಾವುದು?

ಇ) ಪ್ರತಿ ವರ್ಷ 8-10 ಲಕ್ಷ ಜನ ಸೇರುವ ಮೈಲಾರು ಕ್ಷೇತ್ರದಲ್ಲಿ ಸ್ನಾನ ಘಟ್ಟಗಳನ್ನೇನಾದರೂ ನಿರ್ಮಿಸಲಾಗಿದೆಯೇ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು):

ಅ) ದೇವಾಲಯಗಳ ಸಂಖ್ಯೆ: 41366 ಆದಾಯ ರೂ. 15,02,89, 083-00 ವೆಚ್ಚ ರೂ. 12,23,33,596-00

ಆ) ಮುಜರಾಯಿ ಇಲಾಖೆಯ ನಿಯಂತ್ರಣದಲ್ಲಿರುವ ಎಲ್ಲಾ ದೇವಾಲಯಗಳಿಗೆ ಮುಕ್ತ ಪ್ರದೇಶವಿದೆ. ಮಾಪನ ಇಲ್ಲದಿರುವುದರಿಂದ, ಭಕ್ತಾದಿಗಳ ಸಂಖ್ಯೆಯನ್ನು ನಿಖರವಾಗಿ ತಿಳಿಸುವುದು ಕಷ್ಟ ಸಾಧ್ಯ.

ಇ) ಇಲ್ಲ.

ಕೃಷಿ ಇಲಾಖೆಯ ವಾಹನಗಳ ಹರಾಜು

300 - ಶ್ರೀ ಉಮಾಪತಿ (ಹೊಳಲ್ಕೆರೆ): ಮಾನ್ಯ ಕೃಷಿ ಮತ್ತು ತೋಟಗಾರಿಕೆ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೃಷಿ ಇಲಾಖೆಯಲ್ಲಿ ಹಾಲಿ ಇರುವ ವಾಹನಗಳ ಸಂಖ್ಯೆ ಎಷ್ಟು?

ಆ) ಆ ಪೈಕಿ ಈಗ ಚಾಲ್ತಿಯಲ್ಲಿರುವ ಹಾಗೂ ದುರಸ್ತಿಯಲ್ಲಿರುವ ವಾಹನಗಳ ಸಂಖ್ಯೆ ಎಷ್ಟು?

ಇ) ದುರಸ್ತಿಯಲ್ಲಿರುವ ವಾಹನಗಳನ್ನು ಹರಾಜು ಮಾಡಲಾಗುವುದೇ ಅಥವಾ ದುರಸ್ತಿ ಮಾಡಿಸಲಾಗುವುದೇ?

ಈ) ಕೃಷಿ ಇಲಾಖೆಗೆಂದೇ ವಾಹನಗಳನ್ನು ಖರೀದಿಸುವ ಪ್ರಸ್ತಾವನೆ ಏನಾದರೂ ಇದೆಯೇ?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಕೃಷಿ ಮತ್ತು ತೋಟಗಾರಿಕೆ ಸಚಿವರು):

ಅ) 554

ಆ) ಚಾಲ್ತಿಯಲ್ಲಿ 450 ಹಾಗೂ ದುರಸ್ತಿಯಲ್ಲಿ 104 ವಾಹನಗಳು ಇರುತ್ತವೆ..

ಇ) ಅನೇಕ ವರ್ಷಗಳ ಹಳೆಯದಾದ ಮತ್ತು ಆರ್ಥಿಕವಾಗಿ ಸರ್ಕಾರಕ್ಕೆ ಲಾಭದಾಯಕವಾಗಿ ಚಲಿಸದೇ ಅನುಪಸ್ಥಿತಿಯಲ್ಲಿರುವ ವಾಹನಗಳನ್ನು ನಿಯಮನುಸಾರ ವಿಲೇವಾರಿ ಮಾಡಲಾಗುತ್ತಿದೆ ಮತ್ತು ಲಾಭದಾಯಕವಾಗಿ ಓಡಾಡಬಲ್ಲ ವಾಹನಗಳನ್ನು ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಮೇರೆಗೆ ದುರಸ್ತಿಪಡಿಸಿ ಉಪಯೋಗಿಸಲಾಗುವುದು.

ಈ) ಪ್ರಸಕ್ತ ಸಾಲಿನಲ್ಲಿ ರಾಷ್ಟ್ರೀಯ ಕೃಷಿ ವಿಸ್ತರಣಾ ಯೋಜನೆ-2ರ ಅಡಿಯಲ್ಲಿ ಕೆಲವು ವಾಹನಗಳನ್ನು ಖರೀದಿಸುವ ಬಗ್ಗೆ ಸರ್ಕಾರದಲ್ಲಿ ಪರಿಶೀಲಿಸಲಾಗುತ್ತಿದೆ.

ಕೊಳಚೆ ನಿರ್ಮೂಲನಾ ಮಂಡಲಿಯ ಆಶ್ರಯದಲ್ಲಿ ಕಟ್ಟುತ್ತಿರುವ ಮನೆಗಳ ಸಂಖ್ಯೆ.

760 - ಶ್ರೀ ಪಿ.ಜಿ.ಆರ್. ಸಿಂಧ್ಯ (ಕನಕಪುರ): ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ

ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಕೊಳಚೆ ನಿರ್ಮೂಲನಾ ಮಂಡಳಿ ಆಶ್ರಯದಲ್ಲಿ ಕಟ್ಟುತ್ತಿರುವ ಮನೆಗಳ ಸಂಖ್ಯೆ ಎಷ್ಟು? (ಕಳೆದ 3 ವರ್ಷಗಳ ಪ್ರಗತಿಯನ್ನು ಕೊಡುವುದು)

ಆ) ಕೊಳಚೆ ನಿರ್ಮೂಲನಾ ಮಂಡಳಿಯ ಕಾರ್ಯಕ್ರಮಗಳು ಕುಂಠಿತವಾಗುತ್ತಿರುವುದು ಸರ್ಕಾರಕ್ಕೆ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಕಾರ್ಯಕ್ರಮಗಳನ್ನೇನಾದರೂ ರೂಪಿಸಿದೆಯೇ?

ಶ್ರೀ ಕೆ.ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಸಚಿವರು):

ಅ) ಕಳೆದ 3 ವರ್ಷಗಳಿಂದ 3287 ಮನೆಗಳು ಕಟ್ಟಲು ಯೋಜಿಸಲಾಗಿತ್ತು.

ವರ್ಷ	ತೆಗೆದುಕೊಂಡ ಮನೆಗಳು	ಪೂರ್ಣಗೊಂಡ ಮನೆಗಳು
1987-88	1246	803
1988-89	1000	850
1989-90	1041	1041

ಆ) ಹೌದು

ಇ) ಸುಧಾರಣಾ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ. ಕರ್ನಾಟಕ ಗೃಹ ಮಂಡಳಿಯನ್ನು ಕೊಳಚೆ ಪ್ರದೇಶಗಳಲ್ಲಿ ಹೆಚ್ಚುವರಿ ಗೃಹ ನಿರ್ಮಾಣವನ್ನು ತೆಗೆದುಕೊಳ್ಳಲು ಕೇಳಿಕೊಳ್ಳಲಾಗುತ್ತಿದೆ.

ಬೆಂಗಳೂರು ನಗರದಲ್ಲಿ ರ್ಯಾಪಿಡ್ ಟ್ರಾನ್ಸ್‌ಪೋರ್ಟ್ ಕಾರ್ಯಕ್ರಮ

761 - ಶ್ರೀ ಪಿ.ಜಿ.ಆರ್. ಸಿಂಧ್ಯ (ಕನಕಪುರ): ಮಾನ್ಯ ವಸತಿ ಮತ್ತು ನಗರಾಭಿವೃದ್ಧಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದ ಸಾರಿಗೆ ವ್ಯವಸ್ಥೆಯನ್ನು ಉತ್ತಮಪಡಿಸಲು ಯೋಜಿಸಲಾಗಿದ್ದು ವಿಶ್ವ ಬ್ಯಾಂಕಿನಿಂದ ಸಹಾಯ ಪಡೆಯುವ ರ್ಯಾಪಿಡ್ ಟ್ರಾನ್ಸ್‌ಪೋರ್ಟ್ ಕಾರ್ಯಕ್ರಮ ಯಾವ ಹಂತದಲ್ಲಿದೆ?

ಆ) ಈ ಯೋಜನೆಯನ್ನು ಕೈಬಿಡುವ ಆಲೋಚನೆ ಏನಾದರೂ ಸರ್ಕಾರಕ್ಕಿದೆಯೇ?

ಶ್ರೀ ಕೆ. ಜೆ. ಜಾರ್ಜ್ (ವಸತಿ ಮತ್ತು ನಗರಾಭಿವೃದ್ಧಿ ಮಂತ್ರಿಯವರು):

ಅ) ಬೆಂಗಳೂರು ನಗರ ಸಾರಿಗೆ ಯೋಜನೆಯು, ವಿದೇಶಿ ಸಹಾಯ ಪಡೆವ ಯೋಜನೆಗಳ ರಾಜ್ಯ ಮಟ್ಟದ ಪರಿಶೀಲನಾ ಸಮಿತಿಯ ಪರಿಶೀಲನೆಗೆ ಮಂಡಿಸಲಾಗುತ್ತಿದೆ.

ಆ) ಇಲ್ಲ

ಶ್ರೀ ಕ್ಷೇತ್ರ ಮೈಲಾರದಿಂದ ಬಂದ ಆದಾಯ

51 - ಶ್ರೀ ಗೋವಿಂದಪ್ಪ ಹನುಮಂತಪ್ಪ ಜುಟ್ಟಲ್ (ಕುಂದಗೋಳ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶ್ರೀ ಕ್ಷೇತ್ರ ಮೈಲಾರದಿಂದ ಕಳೆದ ಹತ್ತು ವರ್ಷಗಳಲ್ಲಿ ಬಂದ ಆದಾಯವೆಷ್ಟು?

ಆ) ಶ್ರೀ ಕ್ಷೇತ್ರ ಮೈಲಾರದಲ್ಲಿ ಪ್ರವಾಸಿ ಬಂಗಲೆ ಏನಾದರೂ ಇದೆಯೇ, ಇದ್ದರೆ ಇದರಲ್ಲಿನ ಸೌಲಭ್ಯಗಳಾವುವು?

ಇ) ಅಲ್ಲಿ ಧರ್ಮಶಾಲೆಗಳೇನಾದರೂ ಇದೆಯೇ, ಇದ್ದಲ್ಲಿ ಅವುಗಳ ಸಂಖ್ಯೆ ಎಷ್ಟು?